**JULY 30 , 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಆಕಾಶವಾಣಿ**
**ಪ್ರದೇಶ ಸಮಾಚಾರ**
**ಓದಿದವರು: ರವಿ ಕುಲಕರ್ಣಿ**

<><><>

**ಮುಖ್ಯಾಂಶಗಳು**

<><><>

- **ಮೈದುಂಬಿ ಕಂಗೊಳಿಸುತ್ತಿರುವ** ಕಬಿನಿ ಜಲಾಶಯ: ಬಾಗಿನ ಅರ್ಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ.

- **ವಿಧಾನಸಭೆಯ ಕಡತ ಸೇರಿದಂತೆ** ಎಲ್ಲಾ ಅಂಶಗಳ ಡಿಜಿಟಲೀಕರಣಕ್ಕೆ ಚಿಂತನೆ– ವಿಧಾನಸಭಾಧ್ಯಕ್ಷ ಯು.ಟಿ.ಖಾದರ್.

- **ರಾಜ್ಯದ ನೆರೆಪೀಡಿತ** ಪ್ರದೇಶಗಳಿಗೆ ಬಿಜೆಪಿ ನಾಯಕರ ಭೇಟಿ: ಆರು ತಂಡಗಳ ರಚನೆ: ಹಾನಿಯ ಕುರಿತು ಅಧ್ಯಯನ.

- **ರಾಜ್ಯದಲ್ಲಿ ಕಡಿಮೆಗೊಂಡ** ಮಳೆ ತೀವ್ರತೆ: ವಿವಿಧ ನದಿಗಳಲ್ಲಿ ಒಳಹರಿವು ಹೆಚ್ಚಳ: ಅಪಾಯದ ಸಂಭವನೀಯತೆ ಇರುವಲ್ಲಿ ಜಿಲ್ಲಾಡಳಿತಗಳಿಂದ ಅಗತ್ಯ ಕ್ರಮ

**ಈಗ ವಾರ್ತೆಗಳ ವಿವರ**

**ಪ್ರದೇಶ ಸಮಾಚಾರ30-7-24** **ಮುಖ್ಯಮಂತ್ರಿ ಬಾಗಿನ**

**ಮೈಸೂರು ಜಿಲ್ಲೆ ಸೇರಿದಂತೆ** ಲಕ್ಷಾಂತರ ಜನರ ಜೀವನಾಡಿಯಾಗಿರುವ ಕಬಿನಿ ಜಲಾಶಯ ಮೈದುಂಬಿ ಕಂಗೊಳಿಸುತಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ಜಲಾಶಯಕ್ಕೆ ಬಾಗಿನ ಅರ್ಪಿಸಿದರು.

ಕರ್ನಾಟಕ ಸರ್ಕಾರ, ಜಲಸಂಪನ್ಮೂಲ ಇಲಾಖೆ ಹಾಗೂ ಕಾವೇರಿ ನೀರಾವರಿ ನಿಗಮ ನಿಯಮಿತ ವತಿಯಿಂದ ಹೆಚ್.ಡಿ.ಕೋಟೆ ತಾಲ್ಲೂಕಿನ ಬೀಚನಹಳ್ಳಿಯ 'ಕಬಿನಿ ಜಲಾಶಯಕ್ಕೆ ಬಾಗಿನ ಅರ್ಪಣೆ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ.ಮಹದೇವಪ್ಪ, ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸರಾಜು ಮತ್ತಿತರರು ಪಾಲ್ಗೊಂಡಿದ್ದರು.

ಎಐಆರ್

**ಪ್ರದೇಶ ಸಮಾಚಾರ30-7-24** **ಯು ಟಿ ಖಾದರ್**

**ವಿಧಾನಸಭೆಯ ಕಡತ ಸೇರಿದಂತೆ** ಎಲ್ಲಾ ಅಂಶಗಳನ್ನು ಡಿಜಿಟಲೀಕರಣಗೊಳಿಸುವ ಉದ್ದೇಶ ಇದೆ ಎಂದು ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಹೇಳಿದ್ದಾರೆ.

ಮಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿಜಿಲೀಕರಣಕ್ಕೆ ಸಂಬಂಧಿಸಿದಂತೆ ದೇಶಾದ್ಯಂತ ಇರುವ ಸಮಾನ ಅಪ್ಲಿಕೇ ʼನ್ ಬದಲು ಇಲ್ಲಿಗೆ ಪ್ರತ್ಯೇಕ ಅಪ್ಲಿಕೇ ʼನ್ ಹೊಂದಬೇಕು. ಅದಕ್ಕಾಗಿ ಐಟಿ ಸೇರಿದಂತೆ ವಿವಿಧ ತಜ್ಞರ ಸಮಿತಿ ರಚಿಸಲಾಗಿದೆ. ಈ ಸಮಿತಿ ಸಭೆ ನಡೆಸಿ ಶೀಘ್ರವೇ ವರದಿ ನೀಡಲಿದೆ ಎಂದರು.

ವಿಧಾನಸಭಾ ಕಲಾಪಕ್ಕೆ ಹಾಜರಾಗುವ ಹಾಗೂ ನಿರ್ಗಮಿಸುವ ಸಮಯವನ್ನು ಇನ್ನು ಕರಾರುವಕ್ಕಾಗಿ ಕಂಡುಕೊಳ್ಳಲು ಸಾಧ್ಯ. ಅದಕ್ಕಾಗಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಸಲಾಗಿದೆ. ಇದರಿಂದ ನಾನು ಸೇರಿದಂತೆ ಶಾಸಕರು, ಸಚಿವರು ಕಲಾಪದಲ್ಲಿ ಭಾಗಿಯಾದ ಸಮಯವನ್ನು ತಿಳಿದುಕೊಳ್ಳುವುದು ಸುಲಭವಾಗಲಿದೆ ಎಂದು ಹೇಳಿದರು.

**ಪಿಟಿಸಿ ಮಂಗಳೂರು**

**ಪ್ರದೇಶ ಸಮಾಚಾರ/30-7-24** **ಬಿಜೆಪಿ ತಂಡ/ಅಧ್ಯಯನ**

**ರಾಜ್ಯದ ನೆರೆಪೀಡಿತ** ಪ್ರದೇಶಗಳಿಗೆ ಬಿಜೆಪಿ ನಾಯಕರು ಇಂದಿನಿಂದ ಭೇಟಿ ನೀಡಿ, ಹಾನಿಯ ಕುರಿತು ಅಧ್ಯಯನ ನಡೆಸಲಿದ್ದಾರೆ.

ಇದಕ್ಕಾಗಿ ಆರು ತಂಡಗಳನ್ನು ರಚಿಸಲಾಗಿದ್ದು, ಮಳೆ, ಪ್ರವಾಹ ಮತ್ತು ಭೂಕುಸಿತ ಆಗಿರುವ ಪ್ರದೇಶಗಳಲ್ಲಿ ಸಂತ್ರಸ್ತರಿಂದ ಮಾಹಿತಿ ಪಡೆಯಲಿದ್ದಾರೆ. ಜತೆಗೆ ಸರ್ಕಾರ ಕೈಗೊಂಡಿರುವ ಪರಿಹಾರ ಕಾರ್ಯಗಳ ಕುರಿತು ಅವಲೋಕನ ನಡೆಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ವಿಪಕ್ಷ ನಾಯಕ ಆರ್.ಅಶೋಕ ನೇತೃತ್ವದ ತಂಡ ಮಂಗಳೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ, ಶಾಸಕ ಅರಗ ಜ್ಞಾನೇಂದ್ರ ನೇತೃತ್ವದ ತಂಡ ಶಿವಮೊಗ್ಗ ಜಿಲ್ಲೆ, ಡಾ.ಸಿ.ಎನ್ ಅಶ್ವತ್ಥನಾರಾಯಣ ನೇತೃತ್ವದ ತಂಡ ಕೊಡಗು, ಉಡುಪಿ ಜಿಲ್ಲೆಗಳಲ್ಲಿ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ನೇತೃತ್ವದ ತಂಡ ರಾಯಚೂರು, ಯಾದಗಿರಿ ಜಿಲ್ಲೆಗಳಲ್ಲಿ ಅರವಿಂದ ಬೆಲ್ಲದ ನೇತೃತ್ವದ ತಂಡ ಬಾಗಲಕೋಟೆ, ವಿಜಯಪುರ ಜಿಲ್ಲೆಗಳಲ್ಲಿ ಹಾಗೂ ಮಾಜಿ ಸಚಿವ ಶ್ರೀರಾಮುಲು ನೇತೃತ್ವದ ತಂಡ ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿವೆ

**ಪ್ರದೇಶ ಸಮಾಚಾರ 30-7-24 ಮಂಕಾಳು ವೈದ್ಯ**

**ಕಾರವಾರ ಜಿಲ್ಲೆ ಶಿರೂರು** ರಾಷ್ಟ್ರೀಯ ಹೆದ್ದಾರಿ ಬಳಿಯ ಗಂಗಾವಳಿ ನದಿಯಲ್ಲಿ ನೀರಿನ ಸೆಳೆತ ಹೆಚ್ಚಾಗಿರುವುದರಿಂದ ನಾಪತ್ತೆಯಾಗಿರುವ ಮೂವರ ಶೋಧ ಕಾರ್ಯ ಸಾಧ್ಯವಾಗುತ್ತಿಲ್ಲ ಎಂದು ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳು ವೈದ್ಯ ಹೇಳಿದ್ದಾರೆ.

ಶಿರೂರು ಗುಡ್ಡ ಕುಸಿತದ ಸ್ಥಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೂಸೇನೆ, ನೇವಿ, ಎನ್.ಡಿ.ಆರ್.ಎಫ್ ಹಾಗೂ ಎಸ್.ಡಿ.ಆರ್.ಎಫ್ ತಂಡಗಳು ಸತತವಾಗಿ 13 ದಿನ ಪ್ರಯತ್ನ ಮಾಡಿದರೂ ಕಾಣೆಯಾದ ಮೂವರು ಸುಳಿವು ಸಿಕ್ಕಿಲ್ಲ. ನದಿಯ ವೇಗದ ಹರಿವಿನಿಂದ ಕಾರ್ಯಾಚರಣೆ ಕ ್ಟ ಎಂದು ಎಲ್ಲಾ ರಕ್ಷಣಾ ತಂಡಗಳು ತಿಳಿಸಿವೆ. ಹೀಗಾಗಿ ನದಿ ನೀರಿನ ಹರಿವಿನ ವೇಗ ಕಡಿಮೆಯಾದ ತಕ್ಷಣ, ಪುನಃ ರಕ್ಷಣಾ ಕಾರ್ಯಾಚರಣೆ ಪ್ರಾರಂಭವಾಗಲಿದೆ ಎಂದರು.

ಪಿಟಿಸಿ ಕಾರವಾರ

**ಪ್ರದೇಶ ಸಮಾಚಾರ30-7-24** **ಮಧು ಬಂಗಾರಪ್ಪ**

**ನೀರಿನ ಲಭ್ಯತೆ, ಮುಂದಿನ ದಿನಗಳಲ್ಲಿ** ಬರಬಹುದಾದ ಮಳೆ ಅಂದಾಜು ಹಾಗೂ ತಜ್ಞರ ಅಭಿಪ್ರಾಯವನ್ನಾಧರಿಸಿ ಭದ್ರಾ ಎಡದಂಡೆ ಮತ್ತು ಬಲದಂಡೆ ಕಾಲುವೆಗಳ ಮೂಲಕ ನೀರು ಹರಿಸಲು ನಿರ್ಣಯ ಕೈಗೊಳ್ಳಲಾಗಿದೆ ಎಂದು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಜಿಲ್ಲೆಯ ಮಲವಗೊಪ್ಪದ ಕಾಡಾ ಕಚೇರಿಯಲ್ಲಿ ನಿನ್ನೆ ನಡೆದ ಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಭದ್ರಾ ಜಲಾಶಯ ಭರ್ತಿಯಾಗುವ ಹಂತ ತಲುಪಿದೆ. ಈ ಹಂತದಲ್ಲಿ ರೈತರ ಕೃಷಿ ಚಟುವಟಿಕೆಗಳಿಗೆ ಸಹಕಾರಿಯಾಗುವಂತೆ, ಮುಂದಿನ ದಿನಗಳಲ್ಲಿ ಜಲಾಶಯದಲ್ಲಿ ನೀರನ್ನು ಉಳಿಸಿಕೊಳ್ಳುವ, ಸದ್ಬಳಕೆ ಮಾಡಿಕೊಳ್ಳುವ ಹಾಗೂ ಜಿಲ್ಲೆಯಲ್ಲಿ ಕೈಗೊಳ್ಳಬಹುದಾದ ನೀರಾವರಿ ಯೋಜನೆಗಳ ಕುರಿತು ಮುಂದಿನ 15 ದಿನಗಳೊಳಗಾಗಿ ನೀರಾವರಿ ಸಚಿವರು ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಗೊಳಪಡುವ ಎಲ್ಲಾ ಜನಪ್ರತಿನಿಧಿಗಳು, ಅಧಿಕಾರಿಗಳು, ರೈತ ಮುಖಂಡರುಗಳ ಸಭೆಯನ್ನು ಶೀಘ್ರದಲ್ಲಿ ನಡೆಸಲಾಗುವುದು ಎಂದರು.

ವಾಇ

**ಪ್ರದೇಶ ಸಮಾಚಾರ 30-7-24** **ಡಿ.ಸುಧಾಕರ**

**ಬೀದರ್-ಶ್ರೀರಂಗಪಟ್ಟಣ** ರಾಷ್ಟ್ರೀಯ ಹೆದ್ದಾರಿ-150 ರಲ್ಲಿನ ರಸ್ತೆ ಅಡಚಣೆ, ಭೂಸ್ವಾಧೀನ ಪ್ರಕರಣಗಳನ್ನು ಇತ್ಯರ್ಥಪಡಿಸಿ, ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸಲು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಸರ್ಕಾರಿ ಜಮೀನನ್ನು ಅಕ್ರಮವಾಗಿ ಬೇರೆಯವರ ಹೆಸರಿನಲ್ಲಿ ಇ-ಸ್ವತ್ತು ಮಾಡಿ, ರಾಷ್ಟ್ರೀಯ ಹೆದ್ದಾರಿಗಾಗಿ ಭೂಸ್ವಾಧೀನ ಮಾಡಿಕೊಳ್ಳುವ ಸಂದರ್ಭದಲ್ಲಿ, ಭೂಸ್ವಾಧೀನದ ಪರಿಹಾರ ಮೊತ್ತವನ್ನು ಅಕ್ರಮವಾಗಿ ಬೇರೆಯವರ ಹೆಸರಿಗೆ ಪಾವತಿಸಿರುವ ಬಗ್ಗೆ ಹಲವು ದೂರುಗಳು ಬಂದಿವೆ, ಅಲ್ಲದೆ ಕಂಪನಿ ರಸ್ತೆ ನಿರ್ಮಾಣಕ್ಕಾಗಿ ಸಕ್ಷಮ ಪ್ರಾಧಿಕಾರದಿಂದ ಯಾವುದೇ ಅನುಮತಿ ಪಡೆಯದೆ, ರಾಜಧನ ಪಾವತಿಸದೇ ಇರುವ ಬಗ್ಗೆಯೂ ದೂರುಗಳು ಬಂದಿವೆ. ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದವರ ವಿರುದ್ಧ ನಿಯಮಾನುಸಾರ ಕಾನೂನಾತ್ಮಕ ಕ್ರಮ ಕೈಗೊಳ್ಳುವಂತೆ ಸಚಿವರು ಸೂಚನೆ ನೀಡಿದರು.

ಪಿಟಿಸಿ ಚಿತ್ರದುರ್ಗ

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

**ಪ್ರದೇಶ ಸಮಾಚಾರ 30-7-24** **ಬಿಜೆಪಿ ಸಭೆ**

**ರಾಜ್ಯ ಸರ್ಕಾರದ** ವಿವಿದ ಹಗರಣಗಳನ್ನು ಜನರ ಮುಂದಿಡಲು ಮೈಸೂರು ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೀಂದ್ರ ಹೇಳಿದ್ದಾರೆ.

ಬೆಂಗಳೂರಿನಲಿ ನಿನ್ನೆ ನಡೆದ ಮೈಸೂರು ಪಾದಯಾತ್ರೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಭ್ರಷ್ಟಾಚಾರ ರಹಿತ ಆಡಳಿತ ನೀಡುತ್ತೇವೆ ಎಂದು ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ದಿನನಿತ್ಯ ಭ್ರಷ್ಟಾಚಾರದಲ್ಲಿ ನಿರತವಾಗಿದೆ ಎಂದು ಆರೋಪಿಸಿದರು.

ವಿರೋಧ ಪಕ್ಷಗಳಿಗೆ ಬೆದರಿಕೆ ಹಾಕುವ ಮೂಲಕ ಹೋರಾಟ, ಪಾದಯಾತ್ರೆ ಹತ್ತಿಕ್ಕಲು ರಾಜ್ಯ ಸರ್ಕಾರದಿಂದ ಸಾಧ್ಯವಿಲ್ಲ. ನಿಗದಿಯಂತೆ ಪಾದಯಾತ್ರೆ ನಡೆಯಲಿದೆ ಎಂದು ಅವರು ಹೇಳಿದರು.

ವಿಪಕ್ಷ ನಾಯಕ ಆರ್.ಅಶೋಕ, ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಹಿರಿಯ ಮುಖಂಡ ಡಿ.ವಿ.ಸದಾನಂದಗೌಡ, ಸೇರಿದಂತೆ ಶಾಸಕರು ಹಾಗೂ ಪಕ್ಷದ ಹಿರಿಯ ಸಭೆಯಲ್ಲಿ ಪಾಲ್ಗೊಂಡಿದ್ದರು.

**ಡಿಡಿ ಚಂದನ**

**ಪ್ರದೇಶ ಸಮಾಚಾರ 30-7-24** **ಮಳೆ/ಜಿಲ್ಲಾಡಳಿತ ಕ್ರಮ**

**ರಾಜ್ಯದಲ್ಲಿ ಮಳೆ ತೀವ್ರತೆ ಕಡಿಮೆಯಾಗಿದ್ದು,** ಜನಜೀವನ ಸಹಜ ಸ್ಥಿತಿಗೆ ಮರಳುತ್ತಿದೆ. ವಿವಿಧ ನದಿಗಳಲ್ಲಿ ಒಳಹರಿವು ಹೆಚ್ಚಾಗಿದ್ದು, ಅಪಾಯದ ಸಂಭವನೀಯತೆ ಇರುವಲ್ಲಿ ಜಿಲ್ಲಾಡಳಿತಗಳು ಅಗತ್ಯ ಕ್ರಮ ಕೈಗೊಂಡಿವೆ.

**ಹಾವೇರಿ ಜಿಲ್ಲೆಯಲ್ಲಿ** ನಿರಂತರ ಮಳೆಯಿಂದಾಗಿ ಈವರೆಗೆ 1 ಸಾವಿರ 251 ಮನೆಗಳಿಗೆ ಹಾನಿಯಾಗಿದ್ದು, ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಫೋಟೊ ಸಮೇತ ಮಾಹಿತಿ ದಾಖಲಿಸಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ.

5 ಮನೆಗಳಿಗೆ ಸಂಪೂರ್ಣ ಹಾನಿಯಾಗಿದೆ. 11 ಮನೆಗಳಿಗೆ ತೀವ್ರ ಹಾಗೂ 1,235 ಮನೆಗಳಿಗೆ ಭಾಗಶಃ ಹಾನಿಯಾಗಿದೆ. 9 ದನದ ಕೊಟ್ಟಿಗೆಗಳಿಗೆ ಹಾನಿಯಾಗಿವೆ. ವರದಾ ಹಾಗೂ ತುಂಗಭದ್ರಾ ನದಿಯ ಅಚ್ಚುಕಟ್ಟು ಪ್ರದೇಶದಲ್ಲಿರುವ ಜಮೀನಿಗೆ ನೀರು ನುಗ್ಗಿದ್ದು, 3 ಸಾವಿರ 522 ಹೆಕ್ಟೇರ್ ಜಮೀನಿನಲ್ಲಿದ್ದ ಬೆಳೆ ಜಲಾವೃತಗೊಂಡಿದೆ ಎಂದು ತಿಳಿಸಿದ್ದಾರೆ.

**ತುಂಗಭದ್ರಾ ನದಿಯಲ್ಲಿ ನೀರಿನ** ಹರಿವು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ದಾವಣಗೆರೆ ಜಿಲ್ಲೆ ಹೊನ್ನಾಳಿ ಪಟ್ಟಣದ ಬಾಲರಾಜ್‌ಘಾಟ್‌ನ 11 ಕುಟುಂಬಗಳ 64 ಜನರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಈಗಾಗಲೇ ತುಂಗಾ ಜಲಾಶಯದಿಂದ ನದಿಗೆ 74 ಸಾವಿರಕ್ಯೂಸೆಕ್ ನೀರು ಹರಿಬಿಡಲಾಗಿದ್ದು, ಭದ್ರಾಜಲಾಶಯದಿಂದ ಕೂಡ ಯಾವುದೇ ಕ್ಷಣದಲ್ಲಾದರೂ ಹೆಚ್ಚುವರಿ ನೀರನ್ನು ಹರಿಯಬಿಡುವ ಸಂಭವವಿದೆ. ಹೀಗಾಗಿ ನದಿ ಪಾತ್ರದ ಜನರು ಎಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ಸೂಚಿಸಿದ್ದಾರೆ.

**ಕೃಷ್ಣ ಮತ್ತು ಘಟಪ್ರಭಾ** ನದಿ ಪಾತ್ರದಲ್ಲಿ ದಿನದಿಂದ ದಿನಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದು ಬರುತ್ತಿದ್ದು, ಪ್ರವಾಹ ಬೀತಿ ಮತ್ತಷ್ಟು ಹೆಚ್ಚಾಗುತ್ತಿದೆ. ಜಲಾಶಯದ ವ್ಯಾಪ್ತಿಗೆ ಬರುವ ನದಿ ದಡದ ಗ್ರಾಮಸ್ಥರು ತಮ್ಮ ಜಾನುವಾರುಗಳೊಂದಿಗೆ ನದಿಗೆ ಇಳಿಯದಂತೆ ಹಾಗೂ ಹಿನ್ನಿರಿನ ಕಡೆ ಹೋಗದಂತೆ ಮುನ್ನಚ್ಚರಿಕೆ ವಹಿಸಬೇಕು ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಮನವಿ ಮಾಡಿದ್ದಾರೆ.

ನದಿಗಳಲ್ಲಿ ನೀರಿನ ಮಟ್ಟ ಅಪಾಯದ ಹಂತ ತಲುಪುತ್ತಿದೆ. ಮುನ್ನೆಚ್ಚರಿಕೆ ಕುರಿತು ಜಾಗೃತಿ ಮೂಡಿಸಲು ಬಾದಿತ ಗ್ರಾಮಗಳಲ್ಲಿ ಡಂಗೂರ ಸಾರಲಾಗುತ್ತಿದೆ.  ಆದಾಗ್ಯೂ ಸಹ ಜಮಖಂಡಿ ತಾಲೂಕಿನ ಆಲಗೂರ ಗ್ರಾಮದಲ್ಲಿ 65 ವರ್ಷದ ವೃದ್ದ ಹಾಗೂ ಕಡಕೋಳ ಗ್ರಾಮದಲ್ಲಿ 5 ವರ್ಷದ ಬಾಲಕಿ ನೀರು ಪಾಲಾಗಿ ಜೀವ ಹಾನಿಯಾಗಿರುವ ಘಟನೆ ಸಂಭವಿಸಿದ್ದು, ಇಂತಹ ಘಟನೆಗಳು ಪುನರಾವರ್ತನೆ ಆಗದಂತೆ ಮುನ್ನಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

**ಜಿಲ್ಲೆಯಲ್ಲಿ ಕಳೆದ 24** ಗಂಟೆಗಳಲ್ಲಿ 5 ಮನೆಗಳಿಗೆ ತೀವ್ರ ಹಾನಿ, 12 ಮನೆಗಳಿಗೆ ಭಾಗಶಃ ಹಾನಿಯಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಪ್ರಿಯಲಕ್ಷ್ಮಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಕಾರವಾರದಲ್ಲಿ 2 ಮತ್ತು ಕುಮಟಾದಲ್ಲಿ 1 ಸೇರಿದಂತೆ  ಒಟ್ಟು 3 ಕಾಳಜಿ ಕೇಂದ್ರಗಳಲ್ಲಿ 119 ಮಂದಿಗೆ ಆಶ್ರಯ ಕಲ್ಪಿಸಲಾಗಿದೆ. ಜಿಲ್ಲೆಯಲ್ಲಿ ಮಳೆ ತೀವ್ರತೆ ಕಡಿಮೆಯಾಗಿದ್ದು, ಜನಜೀವನ ಸಹಜ ಸ್ಥಿತಿಗೆ ಮರಳುತ್ತಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

ಪಿಟಿಸಿ ಹಾವೇರಿ,ದಾವಣಗೆರೆ, ಚಿತ್ರದುರ್ಗ, ಕಾರವಾರ

## ಈಗ ಸಂಕ್ಷಿಪ್ತ ಸುದ್ದಿಗಳು

**ಮೈಸೂರು ಜಿಲ್ಲೆಯ** ಎಚ್ ಡಿ ಕೋಟೆ ತಾಲ್ಲೂಕಿನ ಬೀಚನಹಳ್ಳಿಯಲ್ಲಿರುವ ಕಬಿನಿ ಜಲಾಶಯ ಭರ್ತಿಯಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಜಲ ಸಂಪನ್ಮೂಲ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ನಿನ್ನೆ ಪೂಜೆ ಸಲ್ಲಿಸಿ, ಬಾಗಿನ ಅರ್ಪಿಸಿದರು.

**ಬೆಳಗಾವಿ ಜಿಲ್ಲೆಯಲ್ಲಿ ವ್ಯಾಪಕ** ಮಳೆಯಾಗುತ್ತಿರುವ ಹಿನ್ನಲೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ನಿನ್ನೆ ಖಾನಾಪೂರ ತಾಲೂಕಿನಲ್ಲಿ ಮುಳುಗಡೆಯಾಗಿರುವ ಸೇತುವೆ ವೀಕ್ಷಿಸಿ, ವಿವಿಧ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಚಿಕ್ಕಬಳ್ಳಾಪುರ ನಗರ ಹೊರವಲಯದ** ಚದಲಪುರ ಬಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ, ಯುವತಿಯರು, ಮಹಿಳೆಯರು ಮತ್ತು ಪುರು ´ರಿಗಾಗಿ ಇದೇ 31 ರಿಂದ 10 ದಿನಗಳ ಕುರಿ ಸಾಕಾಣಿಕೆಯ ಉಚಿತ ತರಬೇತಿ ಹಮ್ಮಿಕೊಳ್ಳಲಾಗಿದೆ.

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಮೈದುಂಬಿ ಕಂಗೊಳಿಸುತ್ತಿರುವ** ಕಬಿನಿ ಜಲಾಶಯ: ಬಾಗಿನ ಅರ್ಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ.

**ವಿಧಾನಸಭೆಯ ಕಡತ ಸೇರಿದಂತೆ** ಎಲ್ಲಾ ಅಂಶಗಳ ಡಿಜಿಟಲೀಕರಣಕ್ಕೆ ಚಿಂತನೆ– ವಿಧಾನಸಭಾಧ್ಯಕ್ಷ ಯು.ಟಿ.ಖಾದರ್.

**ರಾಜ್ಯದ ನೆರೆಪೀಡಿತ** ಪ್ರದೇಶಗಳಿಗೆ ಬಿಜೆಪಿ ನಾಯಕರ ಭೇಟಿ: ಆರು ತಂಡಗಳ ರಚನೆ: ಹಾನಿಯ ಕುರಿತು ಅಧ್ಯಯನ.

**ರಾಜ್ಯದಲ್ಲಿ ಕಡಿಮೆಗೊಂಡ** ಮಳೆ ತೀವ್ರತೆ: ವಿವಿಧ ನದಿಗಳಲ್ಲಿ ಒಳಹರಿವು ಹೆಚ್ಚಳ: ಅಪಾಯದ ಸಂಭವನೀಯತೆ ಇರುವಲ್ಲಿ ಜಿಲ್ಲಾಡಳಿತಗಳಿಂದ ಅಗತ್ಯ ಕ್ರಮ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 9 ಗಂಟೆ 5 ನಿಮಿಷಕ್ಕೆ